# Akashvani : Bangalore
# National Bulletin In Kannada

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**26.03.2024 / 19.35 hrs**

ಮುಖ್ಯಾಂಶಗಳು

೧. ಎಲ್ಲ ಮತಗಟ್ಟೆಗಳಲ್ಲಿ ಕನಿಷ್ಠ ಮೂಲಸೌಕರ್ಯ ಸಜ್ಜಾಗಿರಿಸಲು ಕೇಂದ್ರ ಚುನಾವಣಾ ಆಯೋಗ ಸೂಚನೆ

೨. ಚುನಾವಣಾ ಅಕ್ರಮಗಳ ಬಗ್ಗೆ ಆಯೋಗಕ್ಕೆ ಸಾರ್ವಜನಿಕರು ದೂರು ಸಲ್ಲಿಸಲು ಆಯೋಗದಿಂದ ಸಿ-ವಿಜಿಲ್ ಆಪ್ ಅಭಿವೃದ್ಧಿ

೩. ಪಾಕಿಸ್ತಾನದಲ್ಲಿ ಆತ್ಮಾಹುತಿ ಬಾಂಬರ್ ದಾಳಿ ಐವರು ಚೀನಾ ರಾಷ್ಟ್ರೀಯರು ಸೇರಿದಂತೆ ಆರು ಮಂದಿ ಸಾವು

೪. ಐಪಿಎಲ್ ಟಿ-೨೦ ಕ್ರಿಕೆಟ್: ಚೆನ್ನೈ ಸೂಪರ್ ಕಿಂಗ್ಸ್ - ಗುಜರಾತ್ ಟೈಟನ್ಸ್ ತಂಡಗಳು ಮುಖಾಮುಖಿ

<><*<><>*><>

ದೇಶದ ಬಹುತೇಕ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ ಮುಖ್ಯ ಚುನಾವಣಾಧಿಕಾರಿಗಳಿಗೆ ಕೇಂದ್ರ ಚುನಾವಣಾ ಆಯೋಗ ಮಾರ್ಗಸೂಚಿಯೊಂದನ್ನು ಹೊರಡಿಸಿದೆ. ದೇಶದ ಬಹುತೇಕ ಪ್ರದೇಶಗಳಲ್ಲಿ ಈಗ ರಣ ಬಿಸಿಲಿದ್ದು, ಉಷ್ಣಗಾಳಿ ಬೀಸುತ್ತಿದೆ. ಬೇಸಿಗೆ ತೀವ್ರಗೊಂಡಂತೆ ಮುಂಬರುವ ದಿನಗಳಲ್ಲಿ ತಾಪಮಾನ ಮತ್ತಷ್ಟು ಏರಿಕೆಯಾಗುವ ಸಾಧ್ಯತೆ ಇರುವುದಾಗಿ ಭಾರತ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಬಿಸಿಲು ಹೆಚ್ಚಾದಂತೆ ಜೂನ್ ತಿಂಗಳವರೆಗೆ ಬಿಸಿಗಾಳಿಯ ತೀವ್ರತೆ ಮತ್ತು ಅವಧಿಯೂ ಹೆಚ್ಚಾಗುವ ಆತಂಕವಿದೆ. ಇಂತಹ ಪರಿಸ್ಥಿತಿಯ ನಿರ್ವಹಣೆ ಕುರಿತಂತೆ ರಾಷ್ಟ್ರೀಯ ವಿಕೋಪ ನಿರ್ವಹಣೆ ಪ್ರಾಧಿಕಾರ ನೀಡಿರುವ ಸಲಹೆ ಸೂಚನೆಗಳನ್ನು ಕಡ್ಡಾಯವಾಗಿ ಪಾಲಿಸಬೇಕು ಎನ್ನುವ ಹವಾಮಾನ ಇಲಾಖೆಯ ಸೂಚನೆಗಳನ್ನು ಮಾರ್ಗಸೂಚಿಯಲ್ಲಿ ವಿವರಿಸಲಾಗಿದೆ. ಮಧ್ಯಾಹ್ನ ೧೨ ರಿಂದ ೩ ಗಂಟೆಯ ನಡುವೆ ಜನರು ಹೊರಗೆ ಹೋಗುವುದನ್ನು ತಪ್ಪಿಸಬೇಕು. ಇದರಿಂದ ಉಷ್ಣಗಾಳಿಯ ಪರಿಣಾಮದಿಂದ ತಪ್ಪಿಸಿಕೊಳ್ಳಲು ಸಾಧ್ಯವಿದೆ. ಬಿರುಬೇಸಿಗೆಯ ದಿನಗಳಲ್ಲಿ ಸಾಕಷ್ಟು ಪ್ರಮಾಣದಲ್ಲಿ ನೀರು ಕುಡಿಯಬೇಕು ಮತ್ತು ತಾಜಾ ಆಹಾರ ಸೇವಿಸಬೇಕು ಎಂದೂ ಸಹ ಶಿಫಾರಸ್ಸು ಮಾಡಲಾಗಿದೆ. ಲೋಕಸಭಾ ಚುನಾವಣೆ ದಿನಗಳಲ್ಲಿ ದೇಶದ ಎಲ್ಲ ಮತಗಟ್ಟೆಗಳಲ್ಲಿ ಕುಡಿಯುವ ನೀರು ಮತ್ತು ನೆರಳಿನ ವ್ಯವಸ್ಥೆಯಂತಹ ಕನಿಷ್ಠ ಮೂಲಸೌಕರ್ಯಗಳನ್ನು ಸಜ್ಜಾಗಿಡಬೇಕೆಂದು ಕೇಂದ್ರ ಚುನಾವಣಾ ಆಯೋಗ ಮುಖ್ಯ ಚುನಾವಣಾಧಿಕಾರಿಗಳಿಗೆ ಸೂಚಿಸಿದೆ.

<><*<><>*><>

೧೮ನೇ ಲೋಕಸಭೆಗೆ ಸದಸ್ಯರನ್ನು ಆಯ್ಕೆ ಮಾಡಲು ನಡೆಯಲಿರುವ ಸಾರ್ವತ್ರಿಕ ಚುನಾವಣೆಗೆ ಭಾರತ ಚುನಾವಣಾ ಆಯೋಗ, ಸಕಲ ಸಿದ್ಧತೆಯೊಂದಿಗೆ ಸಜ್ಜಾಗಿದೆ. ದೇಶದಲ್ಲಿ ಚುನಾವಣೆಗಳನ್ನು ಪಾರದರ್ಶಕವಾಗಿ ಹಾಗೂ ಅತ್ಯಂತ ವಿಶ್ವಾಸಾರ್ಹ ರೀತಿಯಲ್ಲಿ ನಡೆಸುವ ಸಂಕಲ್ಪದೊಂದಿಗೆ ಚುನಾವಣಾ ಆಯೋಗ, ಸಮಸ್ತ ಚುನಾವಣಾ ಪ್ರಕ್ರಿಯೆಗಳನ್ನು ಸುಗಮಗೊಳಿಸಲು ತಂತ್ರಜ್ಞಾನದ ನೆರವನ್ನು ಬಳಸಿಕೊಳ್ಳುತ್ತಿದೆ. ಈ ನಿಟ್ಟಿನಲ್ಲಿ ಮತದಾರರು, ಚುನಾವಣಾ ಸಿಬ್ಬಂದಿ ಹಾಗೂ ಆಯೋಗಕ್ಕೆ ನೆರವಾಗುವ ಹಲವು ಆಪ್‌ಗಳನ್ನು ಚುನಾವಣಾ ಆಯೋಗ ಅಭಿವೃದ್ಧಿಪಡಿಸಿದೆ.

ಈ ಪೈಕಿ ಇಂದು ಸಿ-ವಿಜಿಲ್ ಆಪ್ ಬಗ್ಗೆ ಮಾಹಿತಿ.

ದೇಶದಲ್ಲಿ ಚುನಾವಣೆಗಳ ವೇಳೆ ನಡೆಯುವ ಅಕ್ರಮಗಳು, ಮಾದರಿ ನೀತಿ ಸಂಹಿತೆಯ ಉಲ್ಲಂಘನೆ ಪ್ರಕರಣಗಳ ಮೇಲೆ ಕಣ್ಣಿಡುವುದು ಕೇವಲ ಚುನಾವಣಾ ಸಿಬ್ಬಂದಿಯ ಕೆಲಸವಲ್ಲ. ಇದು ಪ್ರತಿಯೊಬ್ಬ ನಾಗರಿಕನ ಕರ್ತವ್ಯವೂ ಹೌದು. ಹಾಗಾಗಿ ಚುನಾವಣಾ ಅಕ್ರಮಗಳ ಬಗ್ಗೆ ಸಾರ್ವಜನಿಕರು ಆಯೋಗಕ್ಕೆ ದೂರು ತಲುಪಿಸಲು ಭಾರತ ಚುನಾವಣಾ ಆಯೋಗ ಸಿ-ವಿಜಿಲ್ ಆಪ್ ಅನ್ನು ಅಭಿವೃದ್ಧಿ ಪಡಿಸಿದೆ.

ದೂರುಗಳನ್ನು ಆನ್‌ಲೈನ್ ಮೂಲಕ ಆಯೋಗಕ್ಕೆ ರವಾನಿಸಲು ಈ ಆಪ್ ನೆರವಾಗುವುದು. ಯಾವುದೇ ಚುನಾವಣಾ ಅಕ್ರಮಗಳ ಬಗ್ಗೆ ಧ್ವನಿಮುದ್ರಣ, ವಿಡಿಯೋ ಚಿತ್ರದ ತುಣುಕುಗಳು ಮತ್ತು ಫೋಟೊ ಮೊದಲಾದ ದಾಖಲೆಗಳನ್ನು ಸಾರ್ವಜನಿಕರು ಇದರ ಮೂಲಕ ಕಳುಹಿಸಬಹುದು.

ಚುನಾವಣೆಗಳಲ್ಲಿ ರಾಜಕೀಯ ಪಕ್ಷಗಳು, ಅಭ್ಯರ್ಥಿಗಳು ಮಾಡುವ ಖರ್ಚು-ವೆಚ್ಚ, ಮತದಾರರ ಮನವೊಲಿಕೆಗೆ ಆಮಿಷಗಳ ಬಳಕೆ ಮೊದಲಾದ ಅಕ್ರಮಗಳ ಬಗ್ಗೆ ದೂರು ನೀಡಲು ಇದನ್ನು ಬಳಸಬಹುದು. ಒಂದುನೂರು ನಿಮಿಷಗಳಲ್ಲಿ ಚುನಾವಣಾಧಿಕಾರಿಗಳು ಅಗತ್ಯ ಕ್ರಮ ಕೈಗೊಳ್ಳುತ್ತಾರೆ ಎಂದು ಮುಖ್ಯ ಚುನಾವಣಾ ಆಯುಕ್ತ ರಾಜೀವ್ ಕುಮಾರ್ ಹೇಳಿದ್ದಾರೆ.

ದೇಶದ ಯಾವ ಮೂಲೆಯಲ್ಲೇ ಆಗಲಿ ನಡೆಯುವ ಚುನಾವಣಾ ಅಕ್ರಮ ಅಥವಾ ನೀತಿ ಸಂಹಿತೆ ಉಲ್ಲಂಘನೆ ಪ್ರಕರಣಗಳ ಬಗ್ಗೆ ತಾವು ನೀಡಿದ ದೂರುಗಳನ್ನು ಆಯೋಗ ಪರಿಗಣಿಸಿದೆಯೇ ಎನ್ನುವ ವಿವರಗಳನ್ನು ಸಹ ಸಾರ್ವಜನಿಕರು ಸಿ-ವಿಜಿಲ್-ಆಪ್ ಮೂಲಕ ವೀಕ್ಷಿಸಬಹುದು.

<><*<><>*><>

ಮುಂಬರುವ ಲೋಕಸಭಾ ಚುನಾವಣೆಗೆ ಬಿಜೆಪಿ, ರಾಜಸ್ಥಾನ ಹಾಗೂ ಮಣಿಪುರ ರಾಜ್ಯದಲ್ಲಿ ಸ್ಪರ್ಧಿಸಲಿರುವ ಮೂವರು ಅಭ್ಯರ್ಥಿಗಳ ಹೆಸರುಗಳನ್ನು ಘೋಷಿಸಿದೆ. ರಾಜಸ್ಥಾನದ ಕರೋಲಿ-ದೋಲಾಪುರ್ ಲೋಕಸಭಾ ಕ್ಷೇತ್ರಕ್ಕೆ ಇಂದೂದೇವಿ ಜಾಟವ್, ದೌಸಾದಿಂದ ಕನ್ನಯ್ಯಲಾಲ್ ಮೀನಾ ಅವರನ್ನು ಅಭ್ಯರ್ಥಿ ಎಂದು ಘೋಷಿಸಿದೆ. ಇನ್ನು

ಮಣಿಪುರ ಲೋಕಸಭಾ ಕ್ಷೇತ್ರಕ್ಕೆ ತೌನೋಜಮ್ ಬಸಂತ್‌ಕುಮಾರ್ ಸಿಂಗ್ ಅವರನ್ನು ತನ್ನ ಅಭ್ಯರ್ಥಿ ಎಂದು ಬಿಜೆಪಿ ಘೋಷಿಸಿದೆ.

<><*<><>*><>

ಬಿಜೆಪಿ ಹಿರಿಯ ನಾಯಕ ಹಾಗೂ ಕೇಂದ್ರ ಸಚಿವ ಕಿರೆನ್ ರಿಜಿಜು ಅರುಣಾಚಲಪ್ರದೇಶದ ಪಶ್ಚಿಮ ಲೋಕಸಭಾ ಕ್ಷೇತ್ರಕ್ಕೆ ಇಂದು ತಮ್ಮ ನಾಮಪತ್ರ ಸಲ್ಲಿಸಿದರು. ಪಶ್ಚಿಮ ಸಿಯಾಂಗ್ ಜಿಲ್ಲೆಯ ಆಲೋದಲ್ಲಿ ಅರುಣಾಚಲ ಪಶ್ಚಿಮ ಲೋಕಸಭಾ ಕ್ಷೇತ್ರದ ಚುನಾವಣಾಧಿಕಾರಿ ಕಚೇರಿಯಲ್ಲಿ ತಮ್ಮ ನಾಮಪತ್ರವನ್ನು ರಿಜಿಜು ಸಲ್ಲಿಸಿದ್ದಾರೆ. ಈ ಸಂದರ್ಭದಲ್ಲಿ ಬಿಜೆಪಿ ಹಿರಿಯ ನಾಯಕ, ಅರುಣಾಚಲಪ್ರದೇಶದ ಮುಖ್ಯಮಂತ್ರಿ ಪೆಮಾಖಂಡು ಉಪಸ್ಥಿತರಿದ್ದರು. ಇದೇ ಲೋಕಸಭಾ ಕ್ಷೇತ್ರದಿಂದ ಕಾಂಗ್ರೆಸ್ ಅಭ್ಯರ್ಥಿಯಾಗಿ ರಾಜ್ಯದ ಮಾಜಿ ಮುಖ್ಯಮಂತ್ರಿ ನಬಮ್ ಟುಕಿ ಇಂದು ತಮ್ಮ ನಾಮಪತ್ರ ಸಲ್ಲಿಸಿದರು. ಅರುಣಾಚಲಪ್ರದೇಶ ಎರಡು ಲೋಕಸಭಾ ಕ್ಷೇತ್ರಗಳನ್ನು ಒಳಗೊಂಡಿದೆ.  ಈ ಎರಡೂ ಕ್ಷೇತ್ರಗಳಿಗೆ ಮುಂದಿನ ತಿಂಗಳ ೧೯ ರಂದು ಮೊದಲ ಹಂತದಲ್ಲಿ ಮತದಾನ ನಡೆಯಲಿದೆ.

<><*<><>*><>

ಅಸ್ಸಾಂನ ದಿಬ್ರುಗಢ ಲೋಕಸಭಾ ಕ್ಷೇತ್ರಕ್ಕೆ ಹಿರಿಯ ಬಿಜೆಪಿ ನಾಯಕ, ಕೇಂದ್ರ ಸಚಿವ ಸರ್ಬಾನಂದ ಸೋನೊವಾಲ್ ಇಂದು ಉಮೇದುವಾರಿಕೆಗೆ ನಾಮಪತ್ರ ಸಲ್ಲಿಸಿದರು. ಈ  ಸಂದರ್ಭದಲ್ಲಿ ಎನ್‌ಡಿಎ ಮೈತ್ರಿಕೂಟದ ಹಲವು ಹಿರಿಯ ನಾಯಕರು ಪಾಲ್ಗೊಂಡಿದ್ದರು. ಲಖೀಂಪುರ್ ಲೋಕಸಭಾ ಕ್ಷೇತ್ರದ ಸಂಸದ ಪ್ರಧಾನ್ ಬರುವಾ ಅವರೂ ಸಹ ಕ್ಷೇತ್ರದಿಂದ ಮರು ಆಯ್ಕೆಗಾಗಿ ನಾಮಪತ್ರ ಸಲ್ಲಿಸಿದರು. ಅಸ್ಸಾಂ ಮುಖ್ಯಮಂತ್ರಿ ಹಿಮಂತ ಬಿಸ್ವಾ ಶರ್ಮಾ, ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು. ರಾಜ್ಯದ ಮಾಜಿ ಮುಖ್ಯಮಂತ್ರಿ ತರುಣ್ ಗೊಗೊಯ್ ಅವರ ಪುತ್ರ ಕಾಂಗ್ರೆಸ್ ಸಂಸದ ಗೌರವ್ ಗೊಗೊಯ್ ಜೊರ್ಹಾಟ್ ಲೋಕಸಭಾ ಕ್ಷೇತ್ರದಲ್ಲಿಂದು ನಾಮಪತ್ರ ಸಲ್ಲಿಸಿದರು.

<><*<><>*><>

ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಪಂಜಾಬ್‌ನಲ್ಲಿ ಬಿಜೆಪಿ ಏಕಾಂಗಿಯಾಗಿ ಚುನಾವಣೆ ಎದುರಿಸಲಿದೆ ಎಂದು ಪಕ್ಷದ ಪಂಜಾಬ್ ಘಟಕದ ಅಧ್ಯಕ್ಷ ಸುನೀಲ್ ಜಾಖರ್ ಪ್ರಕಟಿಸಿದ್ದಾರೆ. ಸಾಮಾಜಿಕ ಮಾಧ್ಯಮದಲ್ಲಿ ಬಿಡುಗಡೆ ಮಾಡಿರುವ ವೀಡಿಯೋ ಸಂದೇಶದಲ್ಲಿ, ಪಕ್ಷದ ನಾಯಕರು ಹಾಗೂ ಕಾರ್ಯಕರ್ತರೊಂದಿಗೆ ಸಮಾಲೋಚನೆ ನಡೆಸಿದ ನಂತರ ಈ ನಿರ್ಧಾರ ಕೈಗೊಳ್ಳಲಾಗಿದೆ ಎಂದು ಅವರು ಹೇಳಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಅವರ ನಾಯಕತ್ವದಡಿ, ಕೇಂದ್ರ ಸರ್ಕಾರ ಪಂಜಾಬ್ ರಾಜ್ಯದ ಹಿತಾಸಕ್ತಿಗಾಗಿ ಹಲವು ಕ್ರಮ ಕೈಗೊಂಡಿದೆ. ಈ ಕ್ರಮಗಳು ರೈತರು ಹಾಗೂ ಸಮಾಜದ ಇತರ ವರ್ಗಗಳಿಗೆ ಪ್ರಯೋಜನಕಾರಿಯಾಗಿವೆ ಎಂದು ಜಾಖರ್ ಹೇಳಿದ್ದಾರೆ.

<><*<><>*><>

ನಾಗಾಲ್ಯಾಂಡ್‌ನ ಏಕೈಕ ಲೋಕಸಭಾ ಕ್ಷೇತ್ರಕ್ಕೆ ಪೀಪಲ್ಸ್ ಡೆಮಾಕ್ರೆಟಿಕ್ ಅಲೆಯನ್ಸ್-ಪಿಡಿಎ ಮೈತ್ರಿಕೂಟದ ಒಮ್ಮತದ ಅಭ್ಯರ್ಥಿಯಾಗಿ ಡಾ.ಚುಂಬೆನ್ ಮುರ್ರೆ ತಮ್ಮ ನಾಮಪತ್ರ ಸಲ್ಲಿಸಿದ್ದಾರೆ. ಪಿಡಿಎ ಮೈತ್ರಿ ಕೂಟದಲ್ಲಿ ನ್ಯಾಷನಲಿಸ್ಟ್ ಡೆಮಾಕ್ರೆಟಿಕ್ ಪ್ರೊಗ್ರೆಸಿವ್ ಪಾರ್ಟಿ, ಭಾರತೀಯ ಜನತಾ ಪಾರ್ಟಿ, ನ್ಯಾಷನಲಿಸ್ಟ್ ಕಾಂಗ್ರೆಸ್ ಪಾರ್ಟಿ, ಸಂಯುಕ್ತ ಜನತಾದಳ, ಅತಾವಳೆ ನೇತೃತ್ವದ ಆರ್‌ಪಿಐ, ಎಲ್‌ಜೆಪಿ, ನ್ಯಾಷನಲ್ ಪೀಪಲ್ಸ್ ಪಾರ್ಟಿ, ನಾಗಾ ಪೀಪಲ್ಸ್ ಫ್ರಂಟ್ ಹಾಗೂ ಸ್ವತಂತ್ರ್ಯ ಪಕ್ಷ ಒಳಗೊಂಡಿವೆ. ಭಾರತೀಯ ರಾಷ್ಟ್ರೀಯ ಕಾಂಗ್ರೆಸ್ ಅಭ್ಯರ್ಥಿ ಎಸ್.ಸುಪೊಂಗ್ಮೆರೆನ್ ಜಮೀರ್, ತಮ್ಮ ನಾಮಪತ್ರ ಸಲ್ಲಿಸಿದ್ದಾರೆ. ನಾಗಾಲ್ಯಾಂಡ್‌ನಲ್ಲಿ ಮುಂಬರುವ ಲೋಕಸಭಾ ಚುನಾವಣೆಗೆ ಈವರೆಗೆ ಒಟ್ಟು ಮೂವರು ಅಭ್ಯರ್ಥಿಗಳು ನಾಮಪತ್ರ ಸಲ್ಲಿಸಿದ್ದಾರೆ. ಮೊದಲ ಹಂತದ ಚುನಾವಣೆಗೆ ನಾಮಪತ್ರ ಸಲ್ಲಿಕೆಗೆ ನಾಳೆ ಕೊನೆಗೊಳ್ಳಲಿದೆ.

<><*<><>*><>

ಪಾಕಿಸ್ತಾನದ ಖೈಬರ್ ಪಖ್ತುಂಖ್ವಾ ಪ್ರದೇಶದ ಶಾಂಗ್ಲಾದಲ್ಲಿಂದು ನಡೆದ ಆತ್ಮಾಹುತಿ ಬಾಂಬರ್ ದಾಳಿಯಲ್ಲಿ ಐದು ಮಂದಿ ಚೀನಾ ರಾಷ್ಟ್ರೀಯರು ಹಾಗೂ ಓರ್ವ ಪಾಕಿಸ್ತಾನದ ವ್ಯಕ್ತಿ ಹತ್ಯೆಯಾಗಿದ್ದಾರೆ. ಇಸ್ಲಾಮಾಬಾದ್‌ನಲ್ಲಿರುವ ದಾಸೂ ಶಿಬಿರಕ್ಕೆ ತೆರಳುತ್ತಿದ್ದ ಚೀನಾದ ಇಂಜಿನಿಯರ್‌ಗಳನ್ನು ಹೊತ್ತೊಯ್ಯುತ್ತಿದ್ದ ವಾಹನದ ಬೆಂಗಾವಲು ವಾಹನಕ್ಕೆ ಸ್ಫೋಟಕ ತುಂಬಿದ ವಾಹನವನ್ನು ಡಿಕ್ಕಿ ಹೊಡೆಸಿ ಆತ್ಮಾಹುತಿ ಬಾಂಬರ್ ದಾಳಿ ನಡೆಸಿದ್ದಾನೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ. ಪೊಲೀಸರು ಸ್ಥಳಕ್ಕೆ ತಲುಪಿದ್ದು, ರಕ್ಷಣಾ ಕಾರ್ಯಾಚರಣೆ ಆರಂಭಿಸಿದ್ದಾರೆ.

<><*<><>*><>

ಇಂಡಿಯನ್ ಪ್ರೀಮಿಯರ್ ಲೀಗ್ ಪಂದ್ಯಾವಳಿಯಲ್ಲಿ ಚೆನ್ನೈನ ಎಂ.ಚಿದಂಬರಂ ಕ್ರೀಡಾಂಗಣದಲ್ಲಿಂದು ಚೆನ್ನೈ ಸೂಪರ್ ಕಿಂಗ್ಸ್ ಮತ್ತು ಗುಜರಾತ್ ಟೈಟನ್ಸ್ ತಂಡಗಳು ಮುಖಾಮುಖಿಯಾಗಿವೆ.  ಟಾಸ್ ಗೆದ್ದ ಗುಜರಾತ್ ಟೈಟನ್ಸ್ ತಂಡ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ.  ನಿನ್ನೆ ಬೆಂಗಳೂರಿನಲ್ಲಿ ನಡೆದ ಐಪಿಎಲ್ ಪಂದ್ಯಾವಳಿಯಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ ಪಂಜಾಬ್ ಕಿಂಗ್ಸ್ ತಂಡದ ವಿರುದ್ಧ ಗೆಲುವು ಸಾಧಿಸಿದೆ.

<><*<><>*><>

ಐಪಿಎಲ್ ೨೦೨೪ರ ಫೈನಲ್ ಪಂದ್ಯ ಮೇ ೨೬ ರಂದು ಚೆನ್ನೈನ ಎಂಎ ಚಿದಂಬರಂ ಸ್ಟೇಡಿಯಂನಲ್ಲಿ ನಡೆಯಲಿದೆ ಎಂದು ಬಿಸಿಸಿಐ ಘೋಷಿಸಿದೆ. ಕ್ವಾಲಿಫೈಯರ್ ೨ನೇ ಪಂದ್ಯವೂ ಚೆನ್ನೈನಲ್ಲಿ ಮೇ ೨೪ ರಂದು ನಡೆಯಲಿದ್ದು, ಇದಕ್ಕೂ ಮೊದಲು ಕ್ವಾಲಿಫೈಯರ್ ೧, ಎಲಿಮಿನೇಟರ್ ಪಂದ್ಯ ಅಹ್ಮದಾಬಾದ್‌ನಲ್ಲಿ ಮೇ ೨೧, ೨೨ ರಂದು ನರೇಂದ್ರ ಮೋದಿ ಸ್ಟೇಡಿಯಂನಲ್ಲಿ ನಡೆಯಲಿದೆ.  ಲೋಕಸಭಾ ಚುನಾವಣೆ ಏಪ್ರಿಲ್ ೧೯ ರಿಂದ ಜೂನ್ ೦೧ ರವರೆಗೂ ನಡೆಯಲಿದೆ. ಮೇ ೧೯ ರಂದು ರಾಜಸ್ಥಾನ ರಾಯಲ್ಸ್ ಹಾಗೂ ಕೋಲ್ಕತ್ತಾ ನೈಟ್ ರೈಡರ್ಸ್ ನಡುವೆ ಗುವಾಹಟಿಯಲ್ಲಿ ಪಂದ್ಯ ನಡೆಯಲಿದೆ.  ಗುವಾಹಟಿಯಲ್ಲಿ ರಾಜಸ್ಥಾನ್ ರಾಯಲ್ಸ್ ತಂಡವನ್ನೊಳಗೊಂಡ ಪಂದ್ಯ ನಡೆಯಲಿದ್ದರೆ, ಧರ್ಮಶಾಲಾದಲ್ಲಿ ಪಂಜಾಬ್ ಕಿಂಗ್ಸ್ ತಂಡವನ್ನೊಳಗೊಂಡ ೨ ಪಂದ್ಯಗಳು ನಡೆಯಲಿವೆ. ಚೆನ್ನೈ ಸೂಪರ್ ಕಿಂಗ್ಸ್‌ನ ತವರಿನಲ್ಲಿ ೩ನೇ ಪಂದ್ಯ ಏಪ್ರಿಲ್ ೦೮ ರಂದು ಕೆಕೆಆರ್ ವಿರುದ್ಧ ನಡೆಯಲಿದೆ. ತಮಿಳುನಾಡಿನಲ್ಲಿ ಮೊದಲ ಹಂತದ

ಚುನಾವಣೆ ಏಪ್ರಿಲ್ ೧೯ ರಂದು ನಡೆದ ಬಳಿಕ ಏಪ್ರಿಲ್ ೨೩ ರಂದು ಸಿಎಸ್‌ಕೆ ಮತ್ತೊಂದು ಪಂದ್ಯವನ್ನು ಲಖನೌ ಸೂಪರ್ ಜೈಂಟ್ಸ್ ವಿರುದ್ಧ ಆಡಲಿದೆ. ಅಂತೆಯೇ, ಮೇ ೧೨ ರ ನಂತರ ಬೆಂಗಳೂರು ಕೇವಲ ಒಂದು ಪಂದ್ಯವನ್ನು ಆಯೋಜಿಸುತ್ತದೆ. ಲಕ್ನೋವು ಏಪ್ರಿಲ್ ೧೯ ರಂದು ಚೆನ್ನೈ ಸೂಪರ್ ಕಿಂಗ್ಸ್‌ಗೆ ಆತಿಥ್ಯ ವಹಿಸಲಿದೆ. ೨೦೨೪ ರ ಟಿ ೨೦ ವಿಶ್ವಕಪ್ ಯುನೈಟೆಡ್ ಸ್ಟೇಟ್ಸ್‌ನಲ್ಲಿ ಪ್ರಾರಂಭವಾಗುವ ಮೊದಲು ಭಾರತೀಯ ತಂಡಕ್ಕೆ ಐದು ದಿನಗಳು ಕಾಲಾವಕಾಶ ಇರುತ್ತವೆ.

**<><*<><>*><>**

ಅಬಕಾರಿ ನೀತಿ ಪ್ರಕರಣದಲ್ಲಿ ಬಂಧಿತರಾಗಿರುವ ದೆಹಲಿ ಮುಖ್ಯಮಂತ್ರಿ ಅರವಿಂದ ಕೇಜ್ರಿವಾಲ್ ಅವರ ರಾಜಿನಾಮೆಗೆ ಆಗ್ರಹಿಸಿ, ಬಿಜೆಪಿ ಕಾರ್ಯಕರ್ತರು ರಾಷ್ಟ್ರ ರಾಜಧಾನಿ ದೆಹಲಿಯಲ್ಲಿಂದು ಪ್ರತಿಭಟನೆ ನಡೆಸಿದರು. ಬಿಜೆಪಿ ಕಾರ್ಯಕರ್ತರು ಆದಾಯ ತೆರಿಗೆ ಕಚೇರಿಯ ಮೆಟ್ರೋ ನಿಲ್ದಾಣದಿಂದ ದೆಹಲಿ ಸಚಿವಾಲಯದವರೆಗೆ ಮೆರವಣಿಗೆ ನಡೆಸಿದರು.

**<><*<><>*><>**

ದೆಹಲಿ ಅಬಕಾರಿ ನೀತಿ ಹಗರಣಕ್ಕೆ ಸಂಬಂಧಿಸಿದ, ಅಕ್ರಮ ಹಣ ವರ್ಗಾವಣೆ ಪ್ರಕರಣದಲ್ಲಿ ಬಂಧಿತರಾಗಿರುವ ಭಾರತ್ ರಾಷ್ಟ್ರ ಸಮಿತಿ ಪಕ್ಷದ ನಾಯಕಿ ಕೆ.ಕವಿತಾ ಅವರನ್ನು ಏಪ್ರಿಲ್ ೯ರವರೆಗೆ ದೆಹಲಿ ನ್ಯಾಯಾಲಯ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದೆ. ಜಾರಿ ನಿರ್ದೇಶನಾಲಯದ ಕಸ್ಟಡಿ ಅವಧಿ ಇಂದಿಗೆ ಮುಗಿದ ಹಿನ್ನೆಲೆಯಲ್ಲಿ ಅವರನ್ನು ದೆಹಲಿ ನ್ಯಾಯಾಲಯವೊಂದರ ಮುಂದೆ ಹಾಜರುಪಡಿಸಲಾಗಿತ್ತು. ೧೫ ದಿನಗಳ ಕಾಲ ಆರೋಪಿಯನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸುವಂತೆ ಜಾರಿ ನಿರ್ದೇಶನಾಲಯ, ನ್ಯಾಯಾಲಯಕ್ಕೆ ಮನವಿ ಸಲ್ಲಿಸಿದ ನಂತರ ರೋಸ್ ಅವೆನ್ಯು ನ್ಯಾಯಾಲಯ ವಿಶೇಷ ನ್ಯಾಯಾಧೀಶೆ ಕಾವೇರಿ ಬವೇಜಾ ಈ ಆದೇಶ ಹೊರಡಿಸಿದರು.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಿಗ್ಗೆ ೭.೦೫ ಕ್ಕೆ <>*><>**